ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ, ಕುಂದಾಪುರ

ಸಿ.ಸಿ. ನಂಬ್ರ:1982/2014

ಚಾಸಾ:2 ಪ್ರಾಸಾ:2

ದಿನಾಂಕ: 03.04.2025

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ಸಂತೋಷ ಕುಮಾರ್ |
| ತಂದೆಯ ಹೆಸರು | : | ಕೊಗ್ಗ |
| ವಯಸ್ಸು | : | 55 ವರ್ಷ |
| ಉದ್ಯೋಗ | : | ಎಲೆಕ್ಟ್ರೀಷಿಯನ್ |
| ವಾಸ ಸ್ಥಳ | : | ಗಂಗೊಳ್ಳಿ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ವಿಶೇಷ ಸ.ಸ.ಅ.ರವರಿಂದ:**

ಆರೋಪಿತರು ನನ್ನ ಅಕ್ಕ, ಆಕೆಯ ಗಂಡ ಮತ್ತು ಮಕ್ಕಳು. ಚಾಸಾ-1 ನನ್ನ ಅಕ್ಕ.ನಾನು ಗಂಗೊಳ್ಳಿಯಲ್ಲಿ ಬೇರೆ ಮನೆಯಲ್ಲಿ ವಾಸವಾಗಿದ್ದೇನೆ. ಆರೋಪಿತರು ಮತ್ತು ಚಾಸಾ-1 ರವರು ಒಟ್ಟಾಗಿ ವಾಸಿಸುತ್ತಿದ್ದರು. ಚಾಸಾ-1ರವರಿಗೆ ಹೊಡೆದಿದ್ದಾರೆ ಎಂದು ಪೊಲೀಸರು ನನಗೆ ತಿಳಿಸಿರುತ್ತಾರೆ. ನಾನು ಹೆಮ್ಮಾಡಿಯಲ್ಲಿ ಎಲೆಕ್ಟ್ರೀಷಿಯನ್ ಕೆಲಸ ಮಾಡುತ್ತಿದ್ದಾಗ ವಿಚಾರವನ್ನು ತಿಳಿಸಿರುತ್ತಾರೆ. ನಾನು ಸ್ಥಳಕ್ಕೆ ಹೋಗಿಲ್ಲ. ಯಾರು ಯಾರಿಗೆ ಏನು ಮಾಡಿದ್ದರು ಎಂದು ನಾನು ತಿಳಿದುಕೊಂಡಿಲ್ಲ. ವೈದ್ಯನಾದ ನನ್ನ ತಮ್ಮ ಸದ್ರಿ ದಿನ ಇರಲಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ವಿರುದ್ದವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**ಪಾಟೀ ಸವಾಲು: ಮಾನ್ಯ ಸ.ಸ.ಅ.ರವರಿಂದ:**

ದಿ: 16-05-2014ರ ಸಂಜೆ 4-30ರ ಸಮಯದಲ್ಲಿ ನಾನು ಹೆಮ್ಮಾಡಿಯಲ್ಲಿ ಕೆಲಸ ಮಾಡುತ್ತಿದ್ದೆ. 1ನೇ ಆರೋಪಿ ನನ್ನ ಅಕ್ಕನ ಮನೆಯಲ್ಲಿ ವಾಸವಾಗಿರುತ್ತಾರೆ. 4ನೇ ಆರೋಪಿ ಮನೆಯಲ್ಲಿಯೇ ಇರುತ್ತಾರೆ. ಘಟನೆ ನಡೆದ ವೇಳೆಗೆ 3ನೇ ಆರೋಪಿ ಇರಲಿಲ್ಲ. ಆ ವಿಚಾರ ನನಗೆ

ತಿಳಿದು ಬಂದಿರುತ್ತದೆ. ನಮ್ಮ ತಂದೆಯ ಆಸ್ತಿಯನ್ನು ಚಾಸಾ-1ರವರಿಗೆ ಕೊಡಬಾರದೆಂಬ ಉದ್ದೇಶದಿಂದ ಆರೋಪಿತರೊಂದಿಗೆ ಶಾಮೀಲಾಗಿ ಅವರಿಗೆ ಸಹಾಯವಾಗುಂತೆ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ಚಾಸಾ-1 ರವರಿಗೆ ಆರೋಪಿತರೆಲ್ಲರೂ ಸೇರಿ ತಲೆಗೆ ಹೊಡೆದು ನೆಲಕ್ಕೆ ದೂಡಿ ರಕ್ತಗಾಯವಾಗುವಂತೆ ಹಲ್ಲೆ ಮಾಡಿ ನಿಂಧಿಸಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಚಾಸಾ-1 ರವರಿಗೆ ರಕ್ತ ಗಾಯವಾಗಿ ಪ್ರಜ್ಞೆ ತಪ್ಪಿ ಬಿದ್ದ ವಿಚಾರ ನನಗೆ ತಿಳಿದಿಲ್ಲ. ಆಕೆಯನ್ನು ಯಾರು ಆಸ್ಪತ್ರೆಗೆ ಸೇರಿಸಿದ್ದರು ಎಂದರೆ ನನಗೆ ಗೊತ್ತಿಲ್ಲ. ಆಕೆಯನ್ನು ನಾನೇ ನನ್ನ ಅಟೋದಲ್ಲಿ ಆಸ್ಪತ್ರೆಗೆ ಸೇರಿಸಿರುತ್ತೇನೆ ಎಂದರೆ ಸರಿಯಲ್ಲ. 1ನೇ ಆರೋಪಿ ಕೈಯಿಂದ ಹೊಡೆದು ಕಾಲಿನಿಂದ ತುಳಿದು ಅವಾಚ್ಯವಾಗಿ ನಿಂಧಿಸಿರುವ ವಿಚಾರವನ್ನು ಚಾಸಾ-1ರವರು ನನಗೆ ತಿಳಿಸಿರುತ್ತಾರೆ ಎಂದರೆ ಸರಿಯಲ್ಲ. ಚಾಸಾ-1 ರವರು ಇದ್ದರೆ ಆಸ್ತಿ ಸಿಗುವುದಿಲ್ಲ ಎಂಬ ಕಾರಣದಿಂದ ನಾವೆಲ್ಲರೂ ಆಕೆಯನ್ನು ಮನೆಯಿಂದ ಹೊರಗೆ ಹಾಕಿ ಆಸ್ತಿಯನ್ನು ಕಬಳಿಸಬೇಕೆಂದು ಶಾಮೀಲಾಗಿರುತ್ತೇವೆ ಎಂದರೆ ಸರಿಯಲ್ಲ. ಪೊಲೀಸರು ನನ್ನನ್ನು ಠಾಣೆಗೆ ಕರೆಯಿಸಿ ವಿಚಾರಣೆ ಮಾಡಿರುತ್ತಾರೆ.

ಚಾಸಾ-1ರವರಿಗೆ ರಕ್ತಗಾಯವಾಗಿ ಪ್ರಜ್ಞೆ ತಪ್ಪಿ ಬಿದ್ದಿದ್ದಾಗ 1 ಮತ್ತು 4ನೇ ಆರೋಪಿತರು ಹೋಗಿ ಆಕೆಯ ವಿರುದ್ಧ ಠಾಣೆಯಲ್ಲಿ ಸುಳ್ಳು ಪಿರ್ಯಾದನ್ನು ನೀಡಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿತರು ಮಾಡಿರುವ ತಪ್ಪಿಗೆ ಶಿಕ್ಷೆಯಾಗುವುದನ್ನು ತಪ್ಪಿಸಲು ಅವರಿಗೆ ಸಹಾಯವಾಗುವಂತೆ ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿತರ ಪರ ವಕೀಲರಾದ ಶ್ರೀ ಎಂ ಡಿ ಎಸ್ ರವರಿಂದಃ</u>**

ಪಾಟೀ ಸವಾಲು ಇಲ್ಲ ಎಂದು ನುಡಿಯುತ್ತಾರೆ.

**<u>ಮರು ವಿಚಾರಣೆಃ</u>** <u>ಇಲ್ಲ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**